**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.** PW-4

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿನಾಂಕ 20.06.2025

ಪಾಟೀ ಸವಾಲುಃ 1 ನೇ ಪ್ರತಿವಾದಿ ಪರ ವಕೀಲರಿಂದಃ

ನಾನು ಬೀರೇಶ್ವರ ದೇವಸ್ಥಾನದ ಕಮಿಟಿಯ ಸದಸ್ಯನಲ್ಲ. ಬೀರೇಶ್ವರ ಸ್ವಾಮಿ ದೇವಸ್ಥಾನಕ್ಕೆ ಅರ್ಚಕ ವೃತ್ತಿ ಮಾಡುತ್ತೇನೆ ಎಂದು ಯಾರಾದರೂ ಸ್ವಇಚ್ಛೆಯಿಂದ ಬಂದಿರುತ್ತಾರೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಅದರ ಬಗ್ಗೆ ಗೊತ್ತಿರುವುದಿಲ್ಲಎಂದು ನುಡಿಯುತ್ತಾರೆ.

ಸರ್ವೆ ನಂ.17 ರಲ್ಲಿ ಬೇರೆ ಬೇರೆ ವ್ಯಕ್ತಿಗಳು ಸೇರಿಕೊಂಡಿರುತ್ತಾರೆ ಎಂದು ನಿಮ್ಮ ಮುಖ್ಯ ವಿಚಾರಣೆಯಲ್ಲಿ ಬರೆಸಿದ್ದು ಅವರ ಹೆಸರುಗಳನ್ನು ಹೇಳಲು ಆಗುತ್ತದೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ.

ಸರ್ವೆ ನಂ.17 ರಲ್ಲಿ ಸ್ವಾಧೀನದಲ್ಲಿ ಇರುವ ವ್ಯಕ್ತಿಗಳಿಗೆ ಸ್ವತ್ತು ಹೇಗೆ ಬಂತು ಎಂದು ದಾಖಲೆಗಳನ್ನು ನೋಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರೆದು ಸದರಿ ಆಸ್ತಿ ಬೀರೇಶ್ವರ ಸ್ವಾಮಿ ದೇವಸ್ಥಾನಕ್ಕೆ ಸೇರಿದ್ದು ಎಂದು ನುಡಿಯುತ್ತಾರೆ. ದೇವಸ್ಥಾನಕ್ಕೆ ಸೇರಿದ ಸ್ವತ್ತಿನ ಬಗ್ಗೆ ನಾನು ದಾಖಲೆಗಳನ್ನು ನೋಡಿರುವುದಿಲ್ಲ. ನನಗೆ ದೇವಸ್ಥಾನದ ಬಗ್ಗೆ ಯಾವುದೇ ಮಾಹಿತಿ ಇರದಿದ್ದರೂ ಸಹಾ ದೇವಸ್ಥಾನದ ಪೂಜಾರಿಯಾದ ವೀರಭದ್ರಸ್ವಾಮಿರವರ ಮಾತನ್ನು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ **2, 3, 7** ಮತ್ತು **9** ನೇ ಪ್ರತಿವಾದಿ ಪರ ವಕೀಲರಿಂದಃ

ಈ ಹಂತದಲ್ಲಿ 2, 3, 7 ಮತ್ತು 9 ನೇ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದರಿಂದ ಆಲಿಸಿ ಮುಂದೂಡಲಾಯಿತು.

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಸಾ.ಓ.ಹೇ.ಸ.ಒ**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆಎಂಎಫ್‌ಸಿ., ಶ್ರೀರಂಗಪಟ್ಟಣ.**